ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1251/2021

ಚಾಸಾ:1 ಪ್ರಾಸಾ:1

ದಿನಾಂಕ: 18.02.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸಂದೀಪ್ |
| ತಂದೆಯ ಹೆಸರು | : | ಸುರೇಂದ್ರ |
| ವಯಸ್ಸು | : | 33 ವರ್ಷ |
| ಉದ್ಯೋಗ | : | ಟೆಕ್ನೀಷಿಯನ್ |
| ವಾಸ ಸ್ಥಳ | : | ಕೋಟಾ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಮೃತ ಪ್ರವೀಣ್ ನನ್ನ ಸ್ನೇಹಿತ. ಆತ ಈಗ ಮೃತಪಟ್ಟಿರುತ್ತಾರೆ. ಒಂದು ದಿನ ರಾತ್ರಿ ನನ್ನ ಸ್ನೇಹಿತ ಕರೆ ಮಾಡಿ ಕೊಟೇಶ್ವರದ ಪ್ರೀತಂ ಬಾರ್ ಬಳಿ ಒಂದು ಅಪಘಾತವಾಗಿರುವುದಾಗಿ ತಿಳಿಸಿ ನಾನು ಹೋಗು ವೇಳೆಗೆ ಗಾಯಾಳುವನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಅಲ್ಲಿ ಆತ ಮೃತಪಟ್ಟಿರುವುದು ತಿಳಿದು ಬಂದಿರುತ್ತದೆ. ಸ್ಥಳಕ್ಕೆ ಹೋದಾಗ ಯಾವುದೇ ವಾಹನಗಳು ಇರಲಿಲ್ಲ.

ಸಾಕ್ಷಿ ದ್ವಿ ಚಕ್ರ ವಾಹನ ಹಾಗೂ ಬಸ್ಸಿ ನ ಪೋಟೋಗಳನ್ನು ನೋಡಿ ಗುರುತಿಸಿಲ್ಲ. ಸಾಕ್ಷಿ ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿಃ 18-02-2021 ರಂದು ರಾತ್ರಿ 9-30ರ ಸಮಯದಲ್ಲಿ ಕೋಟೇಶ್ವರದ ಹಾಲಾಡಿ ರಸ್ತೆಯಲ್ಲಿ ನಾನು ಮತ್ತು ಪ್ರವೀಣ್ ರವರು ತಮ್ಮ ಪ್ರತ್ಯೇಕ ಗಾಡಿಗಳಲ್ಲಿ ಮೆಹಂದಿ ಕಾರ್ಯಕ್ರಮಗಳನ್ನು ಮುಗಿಸಿ ಪ್ರೀತಂ ಬಾರ್ ಹ ತ್ತಿರ ಬರುತ್ತಿದ್ದಾಗ ಎದುರುಗಡೆ ಅಂದರೆ ಹಾಲಾಡಿಯಿಂದ ಕೋಟೇಶ್ವರದ ಕಡೆಗೆ ನಾವು ಬರುತ್ತಿದ್ದು ಪ್ರವೀಣ್ ರವರು ಕೆಎ-20-ಇವಿ-9759 ಗಾಡಿಯನ್ನು ಚಲಾಯಿಸಿಕೊಂಡು ಬರುತ್ತಿದ್ದು, ಕೋಟೆಶ್ವರದ ಕಡೆಯಿಂದ ಹಾಲಾಡಿ ಕಡೆಗೆ ಹೋಗುತ್ತಿದ್ದ ಆರೋಪಿ ಚಲಾಯಿಸುತ್ತಿದ್ದ ಕೆಎ-20-ಡಿ-7017 ಬಸ್ಸನ್ನು ಅತೀ ವೇಗ ಹಾಗೂ ನಿಲರ್ಕ್ಷ್ಯತನದಿಂದ ರಸ್ತೆಯ ತೀರ ಬಲ ಬದಿಗೆ ಚಲಾಯಿಸಿಕೊಂಡು ಬಂದು ಪ್ರವೀಣ್ ರವರ ಗಾಡಿಗೆ ಡಿಕ್ಕಿ ಪಡಿಸಿದ ಪರಿಣಾಮ ಆತ ಮೋಟಾರು ಸೈಕಲು ಸಮೇತ ರಸ್ತೆಗೆ ಬಿದ್ದು ಚಿಕಿತ್ಸೆಗಾಗಿ ಎನ್ ಆರ್ ಆಚಾರ್ಯ ಆಸ್ಪತ್ರೆಗೆ ಸಾಗಿಸುವ ವೇಳೆಗೆ ಮೃತಪಟ್ಟಿರುವುದಾಗಿ ನನಗೆ ತಿಳಿದು ಬಂದಿದ್ದು ನಾನು ಈ ಕುರಿತು ನಿಪಿ-1 ರಂತೆ ಪೊಲೀಸರಿಗೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಅಪಘಾತದ ಪ್ರತ್ಯಕ್ಷದರ್ಶಿಯಾಗಿ ಆರೋಪಿಯ ನಿರ್ಲಕ್ಷ್ಯತನದ ಚಾಲನೆಯಿಂದ ಪ್ರವೀಣ್ ರವರು ಮೃತಪಟ್ಟಿದ್ದರೂ ನನಗೆ ತಿಳಿದಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**